**ವಿಜಾಪುರ ಜಿಲ್ಲೆಯ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆ**

**673 (795) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) :** ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಪೈಲಟ್ ಯೋಜನೆಯ ಅಡಿಯಲ್ಲಿ ಬಿಜಾಪುರ ಜಿಲ್ಲೆಯ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯು ಯಾವ ಹಂತದಲ್ಲಿದೆ;

ಆ) ಬಿಡುಗಡೆ ಮಾಡಿದ ಹಣವೆಷ್ಟು; ಈ ಕಾಮಗಾರಿ ಎಷ್ಟು ತಿಂಗಳಲ್ಲಿ ಮುಗಿಸಲಾಗುವುದು?

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :**

ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತುಯ ಒಳಚರಂಡಿ ಮಂಡಳಿ (KUWSDB) ವತಿಯಿಂದ ಬಿಜಾಪುರ ಜಿಲ್ಲೆಯಲ್ಲಿರುವ ಹಳ್ಳಿಗಳಿಗೆ ಮತ್ತು ನಗರಗಳಿಗೆ ಶುದ್ಧವಾದ ಕುಡಿಯುವ ನೀರನ್ನು ಜಲಾಶಯಗಳಿಂದ ಸರಬರಾಜು ಮಾಡುವ ಯೋಜನೆಯನ್ನು ಖಾಸಗಿ ಸಹಭಾಗಿತ್ವದಲ್ಲಿ (PPP) ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಈ ಬೃಹತ್ ಯೋಜನೆಯ ರೂಪುರೇಷೆಗಳನ್ನು ಅಂತಿಮಗೊಳಿಸಲು ಪರಿಶೀಲಿಸುತ್ತಿದೆ. ಮೇಲ್ನೋಟಕ್ಕೆ ಬಂಡವಾಳ ಹೂಡಿಕೆ ಹಾಗೂ ನಂತರದ ನಿರ್ವಹಣೆ ದುಬಾರಿಯಾಗಿರುವುದು ಕಂಡು ಬಂದಿದೆ. ಪ್ರಶ್ನಿತ ಯೋಜನೆಯ ಅನುಷ್ಠಾನಕ್ಕಾಗಿ ಕಾರ್ಯಸಿಂಧುತ್ವ ಆಧಾರದ ಮೇಲೆ ಸಮರ್ಥ ಸಂಸ್ಥೆಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ.

ಆ) ಈ ಯೋಜನೆಗೆ ಹಣ ಬಿಡುಗಡೆ ಆಗಿರುವುದಿಲ್ಲ. ಸದರಿ ಯೋಜನೆಯ ಅನುಷ್ಠಾನ ಸಲುವಾಗಿ ಅನುಮೋದಿತ ಸಂಸ್ಥೆಗೆ ಗುತ್ತಿಗೆ ನೀಡುವಾಗ ನಗರಾಭಿವೃದ್ಧಿ ಇಲಾಖೆ ಸ್ವಾಮ್ಯದಲ್ಲಿರುವ KUWSDB ಕಾಲಮಿತಿ ನಿಗದಿಪಡಿಸಲಿದೆ.